# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೊರಟಗೆರೆ ತಾಲ್ಲೂಕು ಪಂಚಾಯತ್ ವ್ಯಾಪ್ತಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ತೆರವಾಗಿದ್ದ ಮಹಿಳಾ ಆರೋಗ್ಯ ಸಹಾಯಕ ಹುದ್ದೆ ಭರ್ತಿಯಾದ್ದರಿಂದ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಹೆಚ್ಚುವರಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ಇಲಾಖೆ ವೆಚ್ಚ 5 ಶಾಖೆಯ ಕಡತ ಸಂಖ್ಯೆ: ಆಇ 359 ವೆಚ್ಚ 5/2021 ಇ

**ಪ್ರಸ್ತಾವನೆ:**

ತುಮಕೂರು ಜಿಲ್ಲೆ ಕೊರಟಗೆರೆ ಕೊರಟಗೆರೆ ತಾಲ್ಲೂಕು ಪಂಚಾಯತಿ ವ್ಯಾಪ್ತಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ತೆರವಾಗಿದ್ದ ಹಿರಿಯ ಮಹಿಳಾ ಆರೋಗ್ಯ ಸಹಾಯಕಿ ಹುದ್ದೆಗೆ ಶ್ರೀಮತಿ ಶಾಂತಮ್ಮ ಎಸ್. ಇವರನ್ನು ನಿಯುಕ್ತಿಗೊಳಿಸಿರುವುದರಿಂದ ಫೆಬ್ರವರಿ 2021 ಮತ್ತು ಪ್ರಸಕ್ತ ಸಾಲಿನ ವೇತನ 2021-22ಕ್ಕೆ ಅಗತ್ಯವಿರುವ ರೂ.8.00ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2210-00-104-0-61-005ರಡಿ ಹೆಚ್ಚುವರಿಯಾಗಿ ಒದಗಿಸಿ ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಿದೆ.

ಪ್ರಸ್ತಾವನೆ ಪರಿಶೀಲಿಸಿ ತಾಲ್ಲೂಕು ಪಂಚಾಯತಿಯ ಕಾರ್ಯಕ್ರಮದಡಿ ವೇತನ ವೆಚ್ಚಕ್ಕಾಗಿ ರೂ.8.00ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 285 ವೆಚ್ಚ 6/2021(ಇ) ದಿನಾಂಕ: 1ನೇ ಜೂನ್ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ತಾಲ್ಲೂಕು ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ಒಟ್ಟು ರೂ.8.00ಲಕ್ಷ (ರೂಪಾಯಿ ಎಂಟು ಲಕ್ಷಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

| ಕ್ರ.ಸಂ | ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆ.ಶೀ.2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಕೊರಟಗೆರೆ | 2210-00-104-0-61-005 1416409779 | 8.00 |
| | | ಒಟ್ಟು 1.6.2021 | **8.00** |

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ

3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಕೆಪಿಟಿಸಿಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು
6. ಸಂಬಂಧಿಸಿದತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
7. ಸಂಬಂಧಿಸಿದ ಉಪ ಖಜಾನಾಧಿಕಾರಿಗಳು
8. ರಕ್ಷಾ ಕಡತಕ್ಕೆ
9. ಹೆಚ್ಚುವರಿ ಪ್ರತಿ